ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆ ಭರ್ತಿ

872 - ಶ್ರೀ ಚಂದ್ರಶೇಖರ ಮಾಮನಿ (ಪರಸಗಡ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸವದತ್ತಿ ತಾಲ್ಲೂಕಿನ ಪ್ರಾಥಮಿಕ ಶಾಲೆಗಳಲ್ಲಿ ಖಾಲಿಯಿರುವ ಶಿಕ್ಷಕರ ಸಂಖ್ಯೆ ಎಷ್ಟು ?

ಆ) ಹಾಗಿದ್ದಲ್ಲಿ, ಅವುಗಳನ್ನು ಯಾವಾಗ ಭರ್ತಿ ಮಾಡಲಾಗುವುದು ?

ಶ್ರೀ ಹೆಚ್. ಜಿ. ಗೋವಿಂದ ಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) 06.

ಆ) 1995-96ನೇ ಸಾಲಿನ ನೇಮಕಾತಿಯಲ್ಲಿ ಈ ಹುದ್ದೆಗಳನ್ನು ಭರ್ತಿಮಾಡಲಾಗುವುದು.

ಖಾಸಗಿ ಟಿ.ಸಿ. ಹೆಚ್. ಶಾಲೆಗಳ ಬಗ್ಗೆ

874 - ಶ್ರೀ ಕೆ.ಎನ್. ಈಶ್ವರಪ್ಪ (ಶಿವಮೊಗ್ಗ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರದ ಅನುಮತಿಯಿಲ್ಲದೆ ರಾಜ್ಯದಲ್ಲಿ ಎಷ್ಟು ಟಿ.ಸಿ.ಹೆಚ್. ಶಾಲೆಗಳು ಇವೆ; ಆ ಶಾಲೆಗಳನ್ನು ರದ್ದುಗೊಳಿಸಲಾಗಿದೆಯೇ; ರದ್ದಾಗಿದ್ದಲ್ಲಿ ಅಲ್ಲಿನ ಶಾಲೆಯ ಮಕ್ಕಳ ಭವಿಷ್ಯದ ಬಗ್ಗೆ ಸರ್ಕಾರದ ಕ್ರಮ ಏನು ?

ಶ್ರೀ ಹೆಚ್. ಜಿ. ಗೋವಿಂದ ಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ರಾಜ್ಯದಲ್ಲಿ 106 ಅನಧಿಕೃತ ಟಿ.ಸಿ.ಹೆಚ್. ಕಾಲೇಜುಗಳು ಇದ್ದು, ಅವುಗಳಲ್ಲಿ ೨೯ ಕಾಲೇಜುಗಳನ್ನು ಮುಚ್ಚಿಸಲಾಗಿದೆ. ಕರ್ನಾಟಕ ಮಾನ್ಯತೆ ಪಡೆಯುವ ಮತ್ತು ಸಂಯೋಜಿತವಾಗಿಲ್ಲದ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳ ಪ್ರವೇಶ ನಿಷೇಧ ಅಧಿನಿಯಮ 1992 (ಅಧಿನಿಯದು-7:93)ರ ಪ್ರಕಾರ

ಅನಧಿಕೃತ ಟಿ.ಸಿ.ಹೆಚ್. ಕಾಲೇಜುಗಳಲ್ಲಿ ಪ್ರವೇಶ ಪಡೆದ ಅಭ್ಯರ್ಥಿಗಳನ್ನು ಪರೀಕ್ಷೆಗೆ ಕೂಡಿಸಲು ಬರುವುದಿಲ್ಲ.

ಆರೋಗ್ಯ ಇಲಾಖೆಯಲ್ಲಿ ನಡೆದಿರುವ ಅವ್ಯವಹಾರ

875 - ಶ್ರೀ ಗುರುಪಾದಪ್ಪ ನಾಗಮಾರಪಳ್ಳಿ (ಔರದ್) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯ ಆರೋಗ್ಯ ಇಲಾಖೆಯಲ್ಲಿ ಸಾಮಗ್ರಿಗಳ ಖರೀದಿಯಲ್ಲಿ ಅವ್ಯವಹಾರ ನಡೆದಿರುವುದು ನಿಜವೇ ?(ಈ ಬಗ್ಗೆ ವಿವರಗಳನ್ನು ಒದಗಿಸುವುದು)